ಶ್ರೀ ಪಿ. ಜಿ. ಆರ್. ಸಿಂಧ್ಯ (ಸಾರಿಗೆ ಮಂತ್ರಿ ಮತ್ತು ವಸತಿ ರಾಜ್ಯ ಮಂತ್ರಿಗಳು).—

ಅ) ಹೌದು.

ಆ) ವಿವಿಧ ಕ್ಷೇತ್ರಗಳ ಬೆಳವಣಿಗೆ ಮತ್ತು ದೊರೆಯುವ ಮೂಲ ಸಂಪತ್ತನ್ನು ಅವಲಂಬಿಸಿ, ಸರ್ಕಾರವು ಹಂತಹಂತವಾಗಿ ರಾಷ್ಟ್ರೀಕರಣ ಮಾಡುವ ಯೋಜನೆಯ ನೀತಿಯನ್ನು ಅನುಸರಿಸುತ್ತಿದೆ.

ಶಿವಮೊಗ್ಗದಲ್ಲಿರುವ ಸರಕಾರಿ ಗಂಧದ ಎಣ್ಣೆ ಕಾರ್ಖಾನೆ ವಿಸ್ತರಣೆಯ ಬಗ್ಗೆ

೮೪೦ ಶ್ರೀ ಡಿ. ಜಿ. ಬಸವನಗೌಡ (ಹೊನ್ನಾಳಿ),—ಮಾನ್ಯ ಭಾರೀ ಹಾಗೂ ಮಧ್ಯಮ ಕೈಗಾರಿಕಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಶಿವಮೊಗ್ಗದಲ್ಲಿ ಸರ್ಕಾರಿ ಗಂಧದ ಎಣ್ಣೆ ಕಾರ್ಖಾನೆಯ ವಿಸ್ತರಣೆಗಾಗಿ ಕಳೆದ ಎರಡು ವರ್ಷಗಳಲ್ಲಿ ಸರ್ಕಾರದವರು ಕೈಗೊಂಡ ಕ್ರಮಗಳೇನು ?

ಆ) ಯಂತ್ರೋಪಕರಣಗಳ ಖರೀದಿಗಾಗಿ ವಿನಿಯೋಗಿಸಿರುವ ಮೊಬಲಗೆಷ್ಟು ?

ಇ) ಯಾವ ಆಧಾರದ ಮೇಲೆ ಮೇಲ್ಕಂಡ ಯಂತ್ರಗಳನ್ನು ಖರೀದಿಸಲಾಗಿದೆ ?

ಶ್ರೀ ಜೆ. ಹೆಚ್. ಪಟೀಲ್ (ಭಾರೀ ಹಾಗೂ ಮಧ್ಯಮ ಕೈಗಾರಿಕೆ ಮಂತ್ರಿಗಳು).—

ಅ) ಈ ಕಾರ್ಖಾನೆಯ ವಿಸ್ತರಣೆಗಾಗಿ ಕಳೆದ ಎರಡು ವರ್ಷಗಳಿಂದ ಯಾವ ಕ್ರಮವನ್ನು ಸರ್ಕಾರವು ಕೈಗೊಂಡಿಲ್ಲ.

ಆ) ಇ) ಮತ್ತು ಮೇಲೆ ಹೇಳಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಲಾರಿಯಲ್ಲಿ ಪ್ರಯಾಣಿಸುವ ಜನರಿಗೆ ಸೀಟು ಶುಲ್ಕ ವಿಧಿಸುವ ಬಗ್ಗೆ

೮೪೧ ಶ್ರೀ ಸಿ. ಎಂ. ಉದಾಸಿ (ಹಾನಗಲ್ಲ).—ಮಾನ್ಯ ಸಾರಿಗೆ ಹಾಗೂ ವಸತಿ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಲಾರಿಯ ಕ್ಯಾಬಿನ್‌ನಲ್ಲಿ ಮಿತಿಗಿಂತಲೂ ಹೆಚ್ಚಿಗೆ ಪ್ರಯಾಣಿಕರು ಪ್ರಯಾಣಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಅದನ್ನು ನಿಯಂತ್ರಿಸಲು ಸರ್ಕಾರದವರು ಕೈಗೊಂಡ ಕ್ರಮವೇನು?

ಇ) ಕ್ಯಾಬಿನ್‌ನಲ್ಲಿ ನಿಗದಿಪಡಿಸಿದ್ದಕ್ಕಿಂತಲೂ ಹೆಚ್ಚಿಗೆ ಜನ ಕೂಡಲು ಅವಕಾಶವಿದ್ದರೂ ಸರ್ಕಾರದವರು ಏಕೆ ಅನುಮತಿ ನೀಡಲಿಲ್ಲ ?

ಈ) ಇದರಿಂದ ಸರ್ಕಾರಕ್ಕೆ ಬರುವ ಆದಾಯದಲ್ಲಿ ಕಡಿಮೆಯಾದಂತಾಗುವುದಿಲ್ಲವೇ ?

ಶ್ರೀ ಪಿ. ಜಿ. ಆರ್. ಸಿಂಧ್ಯ (ಸಾರಿಗೆ ಹಾಗೂ ವಸತಿ ರಾಜ್ಯ ಮಂತ್ರಿಗಳು).—

ಅ) ಹೌದು.

(ಕೆಲವು ಲಾರಿಗಳಲ್ಲಿ ಮಾತ್ರ)

ಆ) ಕೇಸುಗಳನ್ನು ದಾಖಲು ಮಾಡಿ ಹಾಗೂ ಕಾನೂನಿನ ಪ್ರಕಾರ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಇ) ಕರ್ನಾಟಕ ಮೋಟಾರು ವಾಹನಗಳ ನಿಯಮ ೧೯೬೩ರ ನಿಯಮ ೧೬೧ರ ಪ್ರಕಾರ ಲಾರಿಗಳಲ್ಲಿ ಪ್ರಯಾಣಿಕರನ್ನು ಸಾಗಿಸಲು ಅವಕಾಶವಿಲ್ಲ,

ಈ) ಮೇಲಿನ ಉತ್ತರದಿಂದಾಗಿ ಈ ಪ್ರಶ್ನೆ ಉದ್ಭವಿಸುವುದಿಲ್ಲ,